# JAIN COLLEGE

Address: #463/465, 18th Main Road, SS Royal, 80 Feet Road
Rajarajeshwari Nagar, Bangalore - 560 098

**Date: 2019-2020** **I PUC** **Subject: Kannada**

**MOCK QUESTION PAPER**

**Time Duration: 3 Hrs 15 Mins** **Total Marks: 100**

I ಒಂದು ವಾಕ್ಯದಲ್ಲಿ ಉತ್ತರಿಸಿ. 10X1=10

1. ಚಕ್ರವ್ಯೂಹವನ್ನು ರಚಿಸಿದವರು ಯಾರು?
2. ಚೆನ್ನಯ್ಯ ಮಾಡುತ್ತಿದ್ದ ಕಾಯಕ ಯಾವುದು?
3. ಅರಗಿಳಿಗಳಿಗೆ ಯಾವ ಬಣ್ಣ ಬರೆಯಲಾಗಿದೆ?
4. ಯಾವ ಹಣ್ಣಿನಂತೆ ಮಗು ಕೊಬ್ಬಬಾರದು?
5. ಹುಡುಗನಿಗೆ ಗಾಂಧಿ ಎಂಬ ಹೆಸರನ್ನು ಇಟ್ಟವರು ಯಾರು?
6. ಡಾ. ಸಿ.ಹೆಚ್. ಲಕ್ಷ್ಮಣಯ್ಯನವರು ತಮ್ಮ ಪತ್ನಿಗೆ ಹೇಳಿಕೊಂಡ ಕೊನೆಯ ಆಸೆ ಯಾವುದು?
7. ಲೇಖಕರು ಸಿಪಾಯಿ ದಂಗೆಯನ್ನು ಏನೆಂದು ಕರೆದಿದ್ದಾರೆ?
8. ಬೋಳೇಶಂಕರನ ಹೊಟ್ಟೆನೋವು ಯಾವುದರಿಂದ ವಾಸಿಯಾಯಿತು?
9. ಸೈನಿಕರು ಯಾವುದಕ್ಕೆ ಜಯವಾಗಲಿ ಎಂದು ಹಾಡಿದರು?
10. ಕತ್ತಲೆಯ ನಿಜ ಜನಕ ಯಾರು?

II ಅ. ನಾಲ್ಕು ಪ್ರಶ್ನೆಗಳಿಗೆ ಎರಡು ಮೂರು ವಾಕ್ಯದಲ್ಲಿ ಉತ್ತರಿಸಿ. 4X2=8

11. ದುಶ್ಯಾಸನನು ಅಣ್ಣನಿಗೆ ತೋರಿದ್ದ ವಿನಯಶೀಲತೆ ಯಾವುದು?
12. ಮೂರ್ಛಿತಳಾದ ಸೀತೆಯನ್ನು ಲಕ್ಷ್ಮಣ ಹೇಗೆ ಉಪಚರಿಸಿದನು?
13. ಸರಸ್ವತಿಯ ಸಚಿವ ಮಂಡಲದ ಸದಸ್ಯರು ಯಾರು?
14. ಹೊಟ್ಟೆಯಲ್ಲಿರುವ ಮಗುವು ತನ್ನ ಉಸಿರಿಗೆ ಯಾವುದು ಪಾಶವಾಗಿದೆಯೆಂದು ಭಾವಿಸುತ್ತದೆ?
15. ಭೂಮಿ ಮತ್ತು ಜೀವವನ್ನು ಉಳಿಸುವ ದಾರಿ ಯಾವುದು?

ಆ. ಕೆಳಗಿನ ಪ್ರಶ್ನೆಗಳಲ್ಲಿ ಮೂರಕ್ಕೆ ಎರಡು ಮೂರು ವಾಕ್ಯದಲ್ಲಿ ಉತ್ತರಿಸಿ. 3X2=6

16. ನಮ್ಮ ಯಾವ ಜಿಲ್ಲೆಗಳು ರಾಗಿಯ ಕಣಜಗಳಾಗಿವೆ?
17. ಜ್ಯೋತಿಷ್ಯದ ಪ್ರಕಾರ ಗ್ರಹಗಳೆಷ್ಟು? ಅವುಗಳು ಯಾವುವು?
18. ಮಾಸ್ತರರು ಬಾಡಿಗೆ ಮನೆಯನ್ನು ಹೇಗೆ ಖರೀದಿಸಿದರು?
19. ರಂಗರಾವ್ ಸಮಾಧಿಯ ಮೇಲೆ ಬರೆದ ಹೇಳಿಕೆ ಯಾವುದು?

ಇ. ಕೆಳಗಿನ ಪ್ರಶ್ನೆಗಳಲ್ಲಿ ಮೂರಕ್ಕೆ ಮಾತ್ರ ಎರಡು ಮೂರು ವಾಕ್ಯದಲ್ಲಿ ಉತ್ತರಿಸಿ. 3X2=6

20. ಸಾಹುಕಾರಣ್ಣನು ತನ್ನ ಸಹೋದರರಿಗೆ ಆಸ್ತಿಯನ್ನು ಹೇಗೆ ಹಂಚಿದನು?
21. ಕೋಡಂಗಿಯು ತಾನು ಬೆಳಗ್ಗೆಯಿಂದ ಏನೇನು ಕೆಲಸ ಮಾಡಿದೆನೆಂದು ಹೇಳುತ್ತಾನೆ?
22. ಸೈತಾನನಿಗೆ ಮೊದಲ ಪಂಕ್ತಿಯ ಊಟ ನಿರಾಕರಿಸಿದ್ದು ಏಕೆ?

23. ಬೋಳೇಶಂಕರನು ಏನೆಂದು ಡಂಗುರ ಸಾರಿಸಿದನು?

III ಅ. ಕೆಳಗಿನ ಯಾವುದಾದರು ಎರಡು ವಾಕ್ಯಗಳನ್ನು ಕುರಿತು ಸಂದರ್ಭ ಸ್ವಾರಸ್ಯ ಬರೆಯಿರಿ. 2X3=6

24. ಕರಕ್ಕೆ ಶೃಂಗಾರ ಸತ್ಪಾತ್ರಕ್ಕೀವುದು.
25. ಹುಟ್ಟಿಗಂಟಿ ಬಂದ ಚಿತ್ತದಾಸ್ಯ ಕಳೆವುದೆಂದಿಗೆ.
26. ಚಿತಾಭಸ್ಮವಾದ ಶ್ರೀಗಂಧ ತರುಗಳೇ.

ಆ. ಕೆಳಗಿನ ಯಾವುದಾದರೂ ಒಂದು ವಾಕ್ಯವನ್ನು ಕುರಿತು ಸಂದರ್ಭ ಸ್ವಾರಸ್ಯ ಬರೆಯಿರಿ. 1X3=3

27. ಬೆಳೆಯಲಿ ಬೆಳಯದಿರಲಿ ತೆರಿಗೆ ಕಡ್ಡಾಯವಾಯಿತು.
28. ನಾನು ತಾಯಿಯ ಕರ್ತವ್ಯ ನಿರ್ವಹಿಸಲೇಬೇಕು.

ಇ. ಕೆಳಗಿನ ಯಾವುದಾದರು ಒಂದು ವಾಕ್ಯವನ್ನು ಕುರಿತು ಸಂದರ್ಭ ಸ್ವಾರಸ್ಯ ಬರೆಯಿರಿ. 1X3=3

29. ದಾರಿತಪ್ಪಿದವರಿಗೆ ಗಾದೆ ಬಲ್ಲವರು ಬುದ್ಧಿ ಹೇಳುತ್ತಾರೆ.
30. ಹಸಿರು ಸಾಮ್ರಾಜ್ಯದ ನಮ್ರ ಪ್ರಜೆ ಕಾಣಯ್ಯ ನಾನು.

IV ಅ. ಕೆಳಗಿನ ಯಾವುದಾದರು ಮೂರು ಪ್ರಶ್ನೆಗಳಿಗೆ ಐದಾರು ವಾಕ್ಯದಲ್ಲಿ ಉತ್ತರಿಸಿ. 3X4=12

31. ಕರ್ಣನ ಉದಾತ್ತ ಗುಣಗಳನ್ನು ದುರ್ಯೋಧನ ಹೇಗೆ ಕೊಂಡಾಡಿದ್ದಾನೆ?
32. ಬದುಕು ಸಾರ್ಥಕವಾಗಬೇಕಾದರೆ ಯಾವ ಅಂಶಗಳು ಇರಬೇಕೆಂದು ಅಕ್ಕಮಹಾದೇವಿ ಹೇಳುತ್ತಾಳೆ?
33. ಚೆನ್ನಯ್ಯನಿಗೆ ಶಿವನು ಗಣಪದವಿಯನ್ನು ನೀಡಿದ ಪ್ರಸಂಗವನ್ನು ನಿರೂಪಿಸಿ.
34. ಉಳ್ಳವರ ಸ್ವಾರ್ಥ ಭೂಮಿ ಮತ್ತು ಇಂಧನವನ್ನು ಹೇಗೆ ನಾಶಗೈದಿದೆ?ವಿವರಿಸಿ.

ಆ. ಕೆಳಗಿನ ಯಾವುದಾದರು ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯದಲ್ಲಿ ಉತ್ತರಿಸಿ. 2X4=8

35. ಗಾಂಧಿ ಎಂಬ ಹುಡುಗನ ಸಾವಿನ ಸಂದರ್ಭವನ್ನು ವಿವರಿಸಿರಿ.
36. ಪುರುಷ ಸಮಾಜದ ಬಗ್ಗೆ ಶಕುಂತಲೆಯ ನಿಲುವೇನು?
37. ಹುಲಿಯ ನಾಪಿತನಿಂದ ತಪ್ಪಿಸಿಕೊಂಡ ರೀತಿಯನ್ನು ನಿರೂಪಿಸಿ.

ಇ. ಕೆಳಗಿನ ಯಾವುದಾದರು ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯದಲ್ಲಿ ಉತ್ತರಿಸಿ. 2X4=8

38. ಬೋಳೇಶಂಕರ ತನ್ನ ಅಣ್ಣಂದಿರಿಗೆ ಸಿಪಾಯಿ ಮತ್ತು ನಾಣ್ಯಗಳನ್ನು ಮಾಡಿಕೊಡಲು ಏಕೆ ನಿರಾಕರಿಸುತ್ತಾನೆ?
39. ಚಿನ್ನ ತೆಗೆದುಕೊಂಡು ಅನ್ನ ಕೊಡಿ ಎಂದಾಗ ಸೈತಾನನಿಗೆ ಶಿವಪುರದ ಜನರು ಹೇಗೆ ಪ್ರತಿಕ್ರಿಯಿಸಿದರು?
40. 'ಹಸಿರೇ ಉಸಿರು' ಎಂಬುದನ್ನು ಬೋಳೇಶಂಕರ ಪಾತ್ರದ ಮೂಲಕ ನಾಟಕಕಾರ ಹೇಗೆ ಸ್ಪಷ್ಟಪಡಿಸಿದ್ದಾರೆ ವಿಮರ್ಶಿಸಿ.

V ಅ. ಕೆಳಗಿನ ಯಾವುದಾದರು ಒಂದು ಪದ್ಯದ ಭಾವಾರ್ಥ ಬರೆಯಿರಿ. 1X5-5

41. ಗುರುಪಣ್ಣಿದ ಚಕ್ರವ್ಯೂ
ಹರಚನೆ ಪೆರ್ಜಿರ್ಗರಿದು ಪುಗಲದಂ ಪೊಕ್ಕು ರಣಾ
ಜಿರದೊಳರಿನೃಪರನಿಕ್ಕಿದ
ನರಸುತ ನಿನ್ನೊರೆಗೆ ದೊರೆಗೆ ಗಂಡರುಮೊಳರೇ

ಅಥವಾ

42. ಏಕೆ ನಿಂದೆಹೆ ಪೋಗು ಸೌಮಿತ್ರಿ ಕೋಪಿಸನೆ
ಕಾಕುತ್ಸ್ಥನಿಲ್ಲಿ ತಳುವಿದೊಡೆ ನೆರವುಂಟು ತನ
ಗೀ ಕಾಡೊಳುಗ್ರಜಂತುಗಳಲ್ಲಿ ರಘುನಾಥನೇಕಾಕಿಯಾಗಿರ್ಪನು
ಲೋಕದರಸೇಗೈದೊಡಂ ತನ್ನ ಕಿಂಕರ
ರ್ಬೇಕುಬೇಡೆಂದು ಪೇಳರೆ ಭರತ ಶತೃಘ್ನ
ರೀ ಕೆಲಸಕೊಪ್ಪಿದರೆ ಹನುಮಂತನಿರ್ದಪನೆ ಪೇಳೆಂದಳಲ್ದಳಬಲೆ.

VI ## ಭಾಷಾಭ್ಯಾಸ

ಆ. ಕೆಳಗಿನ ಆರು ಪ್ರಶ್ನೆಗಳಿಗೆ ಸೂಚನೆಗೆ ಅನುಗುಣವಾಗಿ ಉತ್ತರಿಸಿ. 2X6=12

43. ಈ ಪದಗಳಿಗೆ ಅರ್ಥ ಬರೆಯಿರಿ : ಕೈದು , ಅರ್ಕ.
44. ಈ ಪದಗಳಿಗೆ ಸಮಾನಾರ್ಥ ಬರೆಯಿರಿ : ಅಗ್ನಿ, ಪುಂಡರೀಕ.
45. ಬಿಡಿಸಿ ಬರೆಯಿರಿ : ಕಣ್ಣರಳಿಸು, ಏಕೈಕ.
46. ಈ ಪದಗಳಿಗೆ ವಿರುದ್ದ ಪದ ಬರೆಯಿರಿ : ಕ್ರಾಂತಿ , ಖಂಡ .
47. ತತ್ಸಮ–ತದ್ಭವ ಬರೆಯಿರಿ : ವನ , ಕಾವ್ಯ .
48. ಯಾವುದಾದರು ಎರಡು ದ್ವಿರುಕ್ತಿ ಪದಗಳನ್ನು ಬರೆಯಿರಿ.
49. ಯಾವುದಾದರು ಎರಡು ಅನ್ಯದೇಶ್ಯ ಪದಗಳನ್ನು ಬರೆಯಿರಿ.

ಇ. ಈ ಕೆಳಗಿನ ಯಾವುದಾದರು ಒಂದನ್ನು ಕುರಿತು ಪ್ರಬಂದ ಬರೆಯಿರಿ. 1X5=5

50. ಚಲನಚಿತ್ರಗಳ ಅನುಕೂಲ ಮತ್ತು ಅನಾನುಕೂಲಗಳು.
51. ಜಾಗತೀಕರಣ.

ಈ. ಕೆಳಗಿನವುಗಳಲ್ಲಿ ಒಂದಕ್ಕೆ ಉತ್ತರಿಸಿ. 1X4=4

52. ಭಯೋತ್ಪಾದನೆಯ ಹಿನ್ನೆಲೆಯಲ್ಲಿ ನಿಮ್ಮ ಕಾಲೇಜಿಗೆ ರಕ್ಷಣೆಯನ್ನು ನೀಡುವಂತೆ ಪೋಲೀಸ್ ಆಯುಕ್ತರಿಗೆ ಪತ್ರ ಬರೆಯಿರಿ.

ಅಥವಾ

53. ನಿಮ್ಮ ಕಾಲೇಜಿನಲ್ಲಿ ನಡೆದ ಶಾಲಾ ವಾರ್ಷಿಕೋತ್ಸವ ಸಮಾರಂಭದ ಅನುಭವವನ್ನು ಕುರಿತು ಪೋಷಕರಿಗೊಂದು ಪತ್ರ ಬರೆಯಿರಿ.

ಉ. ಒಂದು ಗಾದೆಯನ್ನು ವಿಸ್ತರಿಸಿ ಬರೆಯಿರಿ. 1X4=4

54. ಮಾತು ಬೆಳ್ಳಿ ಮೌನ ಬಂಗಾರ.
55. ಅಕ್ಕಿ ಮೇಲಾಸೆ ನೆಂಟರ ಮೇಲೆ ಪ್ರೀತಿ.

****************************